## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಕಾರ್ಯನಿರ್ವಹಿಸುತ್ತಿರುವ 06 ವಿಶೇಷ ಭೂಸ್ವಾಧೀನಾಧಿಕಾರಿಗಳಿಗೆ ಹೊಸ ವಾಹನ ಖರೀದಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ: ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕೆ.ಐ.ಎ.ಡಿ.ಬಿ. ಬೆಂಗಳೂರು ಇವರ ಪತ್ರ ಸಂಖ್ಯೆ: ಕ.ಕೈ.ಪ್ರ.ಅ.ಮಂ/ಕೇಂಕ/ಆಡಳಿತ-169-ಎ(6) /16297/2021-22, ದಿನಾಂಕ: 04.03.2022.

---*---

ಪ್ರಸ್ತಾವನೆ:

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಈವರೆವಿಗೆ ರಾಜ್ಯಾದ್ಯಂತ 180 ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿಪಡಿಸಿದ್ದು, ಹೊಸ ಕೈಗಾರಿಕಾ ಪ್ರದೇಶ / ಏಕ ಘಟಕ ಸಂಕೀರ್ಣಗಳ ಯೋಜನೆ, ಬೆಂಗಳೂರು-ಮುಂಬೈ ಎಕಾನ್‌ಮಿಕ್ ಕಾರಿಡಾರ್ ಯೋಜನೆ, ಚನ್ನೈ-ಬೆಂಗಳೂರು ಎಕಾನ್‌ಮಿಕ್ ಕಾರಿಡಾರ್ ಯೋಜನೆ, ವಿಮಾನ ನಿಲ್ದಾಣಗಳು, ಮೆಟ್ರೋ ಮತ್ತು ರೈಲ್ವೆ ಯೋಜನೆಗಳು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳಿಗೆ ಅಂದಾಜು 1,59,000 ಎಕರೆ ಜಮೀನನ್ನು ಸ್ವಾಧೀನಪಡಿಸಲಾಗುತ್ತಿದೆ.

ಕೆ.ಐ.ಎ.ಡಿ.ಬಿ.ಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ 12 ವಿಶೇಷ ಭೂಸ್ವಾಧೀನಾಧಿಕಾರಿಗಳ ಪೈಕಿ 06 ವಿಶೇಷ ಭೂಸ್ವಾಧೀನಾಧಿಕಾರಿಗಳಿಗೆ ಮಂಡಳಿಯಿಂದ ವಾಹನ ಒದಗಿಸಲಾಗಿರುತ್ತದೆ. ಉಳಿದ 6 ವಿಶೇಷ ಭೂಸ್ವಾಧೀನಾಧಿಕಾರಿಗಳಿಗೆ ವಾಹನವನ್ನು ಒದಗಿಸಬೇಕಿದ್ದು, ದಿನಾಂಕ: 18.01.2022 ರಂದು ನಡೆದ 376ನೇ ಮಂಡಳಿ ಸಭೆಯಲ್ಲಿ ವಿಶೇಷ ಭೂಸ್ವಾಧೀನಾಧಿಕಾರಿ, ಕಲಬುರಗಿ, ದಾವಣಗೆರೆ, ಮೆಟ್ರೋ-1&2 ಹಾಗೂ ಬಿಎಂಐಸಿಪಿ-1&2 ಇವರುಗಳಿಗೆ ಸರ್ಕಾರಿ ವಾಹನಗಳನ್ನು ಒದಗಿಸಲು 06 ಬೊಲೆರೋ ವಾಹನಗಳನ್ನು ಖರೀದಿಸಲು ಅಧಿಕೃತ ವಿತರಕರಿಂದ Quotations ಪಡೆದು ಆರ್ಥಿಕ ಇಲಾಖೆಯ ಸಹಮತಿ ಪಡೆಯಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ನಿರ್ಣಯಿಸಲಾಗಿದೆ.

ಕೆ.ಐ.ಎ.ಡಿ.ಬಿ. ಸಭೆಯ ನಿರ್ಣಯದಂತೆ M/s Ananth Cars & M/s Sireesh Auto Pvt.Ltd. ಇವರುಗಳಿಂದ ಮಹೀಂದ್ರ ಸಂಸ್ಥೆಯ ಬೊಲೆರೋ ನಿಯೋ ಮತ್ತು ಬೊಲೆರೋ 2 ಮಾದರಿಯ ವಾಹನಗಳಿಗೆ Quotations ಪಡೆದು ದರಪಟ್ಟಿಗಳನ್ನು ಸಲ್ಲಿಸುತ್ತಾ, ಬೊಲೆರೋ ಸಂಸ್ಥೆಯ ಯಾವ ಮಾದರಿಯ ವಾಹನಗಳನ್ನು ಅಧಿಕೃತ ವಿತರಕರಿಂದ ಖರೀದಿಸಬೇಕು ಎಂಬ ಬಗ್ಗೆ ಆರ್ಥಿಕ ಇಲಾಖೆಯ ಸಹಮತಿ ಪಡೆಯಲು ಮೇಲೆ ಓದಲಾದ ಪತ್ರದಲ್ಲಿ ಸಿ.ಇ.ಓ. & ಇ.ಎಂ., ಕೆ.ಐ.ಎ.ಡಿ.ಬಿ. ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರದ ಹಂತದಲ್ಲಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶವನ್ನು ಹೊರಡಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಸಿಐ 145 ಐಎಪಿ(ಇ) 2022,</u>
<u>ಬೆಂಗಳೂರು, ದಿನಾಂಕ: 30.06.2022.</u>

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶೇಷ ಭೂಸ್ವಾಧೀನಾಧಿಕಾರಿ, ಕಲಬುರಗಿ, ದಾವಣಗೆರೆ, ಮೆಟ್ರೋ-1&2 ಹಾಗೂ ಬಿಎಂಐಸಿಪಿ-1&2 ಇವರುಗಳಿಗೆ ರೂ.8.61 ಲಕ್ಷಗಳ (Ex-showroom rate) ಆರ್ಥಿಕ ಮಿತಿಯೊಳಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು 06 ಹೊಸ ವಾಹನಗಳನ್ನು ಖರೀದಿಸಲು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

1. ಪ್ರಸ್ತಾವನೆಗೆ ತಗಲುವ ವೆಚ್ಚವನ್ನು ಕೆ.ಐ.ಎ.ಡಿ.ಬಿ.ಯ ಆಂತರಿಕ ಸಂಪನ್ಮೂಲದಿಂದ ಭರಿಸುವುದು.
2. ಸದರಿ ಅಧಿಕಾರಿಗಳಿಗೆ ಬಾಡಿಗೆ ಆಧಾರದ ಮೇಲೆ ನೀಡಿರುವ ಸಾರಿಗೆ ವ್ಯವಸ್ಥೆಯನ್ನು ರದ್ದುಗೊಳಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 159 ವೆಚ್ಚ-1/ 2022, ದಿನಾಂಕ: 18.06.2022ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಹಾಗೂ ಅವರ ಹೆಸರಿನಲ್ಲಿ

ಎನ್. ಕುಮಾರ್ 30/6/2022

(ಎನ್.ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಕೈ.ಅ),
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.
30/6/2022

ಇವರಿಗೆ:

1) ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
2) ವಿಶೇಷ ಜಿಲ್ಲಾಧಿಕಾರಿ, ಕೆ.ಐ.ಎ.ಡಿ.ಬಿ., ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
3) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1 & ಬಂ.ಹೂ.), ವಿಧಾನಸೌಧ, ಬೆಂಗಳೂರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
5) ನಿರ್ದೇಶಕರು (ತಾಂತ್ರಿಕ ಕೋಶ) ರವರ ಆಪ್ತ ಸಹಾಯಕರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
6) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.